ಕಳಪೆ ಬಿತ್ತನೆ ಬೀಜದಿಂದ ಬೆಳೆ ನಷ್ಟಕ್ಕೆ ಪರಿಹಾರಕ್ಕೆ ಒತ್ತಾಯಿಸಿ ರಸ್ತೆ ಬಂದ್

ಉದಯಕಾಲ ನ್ಯೂಸ್

ಮುಳಬಾಗಿಲು: ಕಳಪೆ ಬಿತ್ತನೆ ಬೀಜದಿಂದ ನಷ್ಟವಾಗಿರುವ ಟೊಮೇಟೊ, ಆಲೂಗಡ್ಡೆ ಪ್ರತಿ ಎಕರೆಗೆ 2 ಲಕ್ಷ ಪರಿಹಾರ ಘೋಷಣೆ ಮಾಡಿ ನಕಲಿ ಬಿತ್ತನೆ ಹಾವಳಿ ನಿಯಂತ್ರಣಕ್ಕೆ ಪ್ರಭಲ ಕಾನೂನು ಕಾಯ್ದೆ ಜಾರಿ ಮಾಡಬೇಕೆಂದು ರೈತ ಸಂಘ ಎನ್ ವಡ್ಡಹಳ್ಳಿ ರಾಜ್ಯಹೆದ್ದಾರಿ ಬಂದ್ ಮಾಡಿ ಉಪ ತಹಸೀಲ್ದಾರ್ ವೆಂಕಟೇಶಪ್ಪ ಮುಂಖಾಂತರ ಮುಖ್ಯ ಮಂತ್ರಿಗಳಿಗೆ ಮನವಿ ನೀಡಿ ಒತ್ತಾಯಿಸಲಾಯಿತು.

ರೈತರ ಬೆಳೆ ನಷ್ಟವಾದರೆ ಪ್ರಕೃತಿ ವಿಕೋಪದಲ್ಲಿ ಪರಿಹರ ನೀಡಲು ಸಾಧ್ಯವಿಲ್ಲ ಎಂಬ ರೈತ ವಿರೋಧಿ ದೋರಣೆ ಅನುಸರಿಸುವ ಸರ್ಕಾರಗಳ ವಿರುದ್ದ ರೈತ ಸಂಘದ ರಾಜ್ಯ ಉಪಾಧ್ಯಕ್ಷ ಕೆ.ನಾರಾಯಣಗೌಡ ಆಕ್ರೋಶ ವ್ಯಕ್ತಪಡಿಸಿದರು.

ಬೆಂಗಳೂರಿಗೆ ಕೂಗಳತೆ ದೂರದಲ್ಲಿರುವ ಕೋಲಾರ ಜಿಲ್ಲೆಯನ್ನು ಸರ್ಕಾರಗಳು ' ಸಂಪೂರ್ಣವಾಗಿ ನಿರ್ಲಕ್ಷೆ ಮಾಡುತ್ತಾ ಬರುವ ಜೊತೆಗೆ ಜಿಲ್ಲೆಯ ರೈತ, ಕೂಲಿ ಕಾರ್ಮಿಕರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ನೀಡುವಲ್ಲಿ ಸರ್ಕಾರಗಳು ವಿಫಲವಾಗಿದೆಂದು ಆರೋಪಿಸಿದರು.

ಸರ್ಕಾರ ಜಿಲ್ಲೆಯನ್ನು ಬರಪೀಡಿತ ಜಿಲ್ಲೆಯೆಂದು ಘೋಷಣೆ ಮಾಡಿದೆ. ಜೊತೆಗೆ ಬರ ಬೆಳೆ ನಷ್ಟದಿಂದ ತತ್ತರಿಸಿರುವ ಜಿಲ್ಲೆಯ ರೈತರ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ ಎಂದು ಅಸಮದಾನ ವ್ಯಕ್ತಪಡಿಸಿದರು.

ತಾಲ್ಲೂಕು ಅಧ್ಯಕ್ಷ ಯಲುವಳ್ಳಿ ಪ್ರಭಾಕರ್ ಮಾತನಾಡಿ, ಸತತ 5 ವರ್ಷಗಳಿಂದ ಜಿಲ್ಲೆಯ ರೈತರ ನಿದ್ದೆಗೆಡಿಸುತ್ತಿರುವ ನಕಲಿ ಬಿತ್ತನೆ ಬೀಜ ಕೀಟನಾಶಕಗಳ ನಿಯಂತ್ರಣವಿಲ್ಲದೆ ಪ್ರತಿ ವರ್ಷ ಲಕ್ಷಾಂತರ ರೂಪಾಯಿ ಬಂಡವಾಳ ಹಾಕಿ ಬೆಳೆದ ಟೊಮೇಟೊಗೆ ಬಿಂಗಿರೋಗ, ಆಲೂಗಡ್ಡೆ ಬೆಳೆ ಗಡ್ಡೆ ಬಿಡದೆ ಜೊತೆಗೆ ಇತರೆ ಬೆಳೆಗಳಿಗೆ ಊಜಿ ನಿಯಂತ್ರಣಕ್ಕೆ ಬಾರದೆ ಲಕ್ಷಾಂತರ ಎಕರೆ ಕೃಷಿ ಭೂಮಿಯಲ್ಲಿ ಬೆಳೆದಿದ್ದ ಬೆಳೆ ಕಣ್ಣ ಮುಂದೆಯೇ ನಷ್ಟವಾಗುತ್ತಿದ್ದರೂ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸದ ಅಧಿಕಾರಿಗಳು ನೆಪ ಮಾತ್ರಕ್ಕೆ ವಿಜ್ಞಾನಿಗಳನ್ನು ಕರೆಯಿಸಿ ಹವಾಮಾನ ವೈಪರೀತ್ಯ, ಬೆಳೆ ನಿರ್ವಹಣೆ ಸಮಸ್ಯೆಯನ್ನು ಇಟ್ಟು ಬಹುರಾಷ್ಟ್ರೀಯ ನಕಲಿ ಕಂಪನಿಗಳ ಪರ ವರದಿ ನೀಡುವ ಪ್ರವೃತ್ತಿ ಮೂಲಕ ವಿಜ್ಞಾನಿಗಳ ಹೆಸರಿನಲ್ಲಿ ಅಜ್ಞಾನಿಗಳಾಗಿದ್ದಾರೆಂದು ಆರೋಪಿಸಿದರು.

ಜಿಲ್ಲಾದ್ಯಂತ 3800 ಹೊರರಾಜ್ಯದ ಬಿತ್ತನೆ ಬೀಜ, ಕೀಟನಾಶ, ರಸಗೊಬ್ಬರ ಕಂಪನಿಗಳು, 1800 ಮಾರಾಟಗಾರರು, 480 ಮಂದಿ ವಿತರಕರು ಕೆಲಸ ಮಾಡುತ್ತಿದ್ದರೂ ಕನಿಷ್ಠ ಸೊಳ್ಳೆ ನಿಯಂತ್ರಣಕ್ಕೆ ಬಾರದ ಔಷಧಿ ನೀಡದಿದ್ದರೆ ಅಂತಹ ಕಂಪನಿಗಳ ಔಷಧಿ ಮಾರಾಟ ಅವಶ್ಯಕತೆಯೇ ? ಎಂದು ಪ್ರಶ್ನಿಸಿದರು. ಪ್ರತಿ ಕಂಪನಿಯವರು ಕಡ್ಡಾಯವಾಗಿ ಜಿಲ್ಲಾಡಳಿತದ ಪರವಾನಗಿ ಪಡೆದರೆ ಮಾತ್ರ ಮಾರಾಟಕ್ಕೆ ಅವಕಾಶ ಎಂಬ ಕಾನೂನು ಜಾರಿ ಮಾಡುವ ಮೂಲಕ ರೈತರ ರಕ್ಷಣೆ ಮಾಡಬೇಕೆಂದು ಒತ್ತಾಯಿಸಿದರು.

ನಕಲಿ ಬಿತ್ತನೆ ಬೀಜದಿಂದ ನಷ್ಟವಾಗಿರುವ ಪ್ರತಿ ಎಕರೆಗೆ 2 ಲಕ್ಷ ಪರಿಹಾರ ಘೋಷಣೆ ಮಾಡುವ ಜೊತೆಗೆ ನಕಲಿ ನಿಯಂತ್ರಣಕ್ಕೆ ಕಾನೂನು ಜಾರಿ ಮಾಡಬೇಕು ಇಲ್ಲವಾದರೆ ರೈತರ ಬೆಳೆದ ಬೆಳೆಯನ್ನು ಅಧಿಕಾರಿ ಹಾಗೂ ಜನ ಪ್ರತಿನಿಧಿಗಳು ಸರಬರಾಜು ಮಾಡದಂತೆ ಚಳವಳಿ ಮಾಡುವ ಎಚ್ಚರಿಕೆಯೊಂದಿಗೆ ಮನವಿ ನೀಡಿ ಒತ್ತಾಯಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ಉಪ ತಹಸೀಲ್ದಾರ್ ವೆಂಕಟೇಶಪ್ಪ ನಿಮ್ಮ ಮನವಿಯನ್ನು ಹಿರಿಯ ಅಧಿಕಾರಿಗಳ ಮುಖಾಂತರ ಸರ್ಕಾರಕ್ಕೆ ಕಳುಹಿಸುವ ಭರವಸೆಯನ್ನು ನೀಡಿದರು.

ಹೋರಾಟದಲ್ಲಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪಾರುಕ್‌ಪಾಷ, ಜಿಲ್ಲಾಧ್ಯಕ್ಷ ಈಕಂಬಳ್ಳಿ ಮಂಜುನಾಥ , ರಾಜ್ಯ ಕಾರ್ಯಧ್ಯಕ್ಷ ಬಂಗಾರಿ ಮಂಜು, ರಾಜೇಸ್, ಬಾಸ್ಕರ್, ಸುನಿಲ್‌ಕುಮಾರ್, ವಿಜಯ್‌ಪಾಲ್, ವಿಶ್ವ, ಪದ್ಮಘಟ್ಟ ಧರ್ಮ, ಹೆಬ್ಬಣಿ ಆನಂದರಡ್ಡಿ, ನಂಗಲಿ ನಾಗೇಶ್, ಮಂಗಸಂದ್ರ ತಿಮ್ಮಣ್ಣ, ಗಿರೀಶ್, ಅಂಬ್ಲಿಕಲ್ ಮಂಜುನಾಥ, ಜುಬೇರ್‌ಪಾಷ, ನಲ್ಲಂಡಹಳ್ಳಿ ಕೇಶವ, ವೇಣು, ಮಾಲೂರು ತಾ.ಅಧ್ಯಕ್ಷ ಯಲ್ಲಣ್ಣ, ಹರೀಶ್, ಮುಂತಾದವರು ಇದ್ದರು.

CHANGE OF NAME

I, Radesh Tumkur Ramalinga Setty Aged about 61 years, Residing at #3, Sai Raksha, 1st Main Road, New Sai Temple, KAlyani Nagar, Vasanthpura, Bangalore-560061, have changed my name from **RADESH TUMKUR RAMALINGA SETTY** to **RADHESH T R**, vide affidavit dated 30/10/2023 sworn before notary H.g Padmanabha Rao, Reg. No.12464, Bangalore.

ಜನತಾ ದರ್ಶನ, ಅಹವಾಲುಗಳನ್ನು ತಿಂಗಳೊಳಗೆ ಬಗೆಹರಿಸಿ: ಸಚಿವ ಕೆ.ಹೆಚ್ ಮುನಿಯಪ್ಪ

ಉದಯಕಾಲ ನ್ಯೂಸ್

ದೇವನಹಳ್ಳಿ: ಜನರ ಸಮಸ್ಯೆಗಳಿಗೆ ಶೀಘ್ರ ಸ್ಪಂದಿಸಲು ರಾಜ್ಯ ಸರ್ಕಾರ ಜನತಾ ದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಜನತಾ ದರ್ಶನದಲ್ಲಿ ಸ್ವೀಕರಿಸಿದ ದೂರು, ಅಹವಾಲುಗಳನ್ನು ತಿಂಗಳೊಳಗಾಗಿ ಬಗೆಹರಿಸಬೇಕು ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವರು ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಹೆಚ್. ಮುನಿಯಪ್ಪ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ಸಂಯುಕ್ತಾಶ್ರಯದಲ್ಲಿ ದೊಡ್ಡಬಳ್ಳಾಪುರ ತಾಲ್ಲೂಕಿನ ಬಾಬು ಜಗಜೀವನ ರಾಮ್ ಭವನದಲ್ಲಿ ಏರ್ಪಡಿಸಲಾಗಿದ್ದ ''ಜನತಾ ದರ್ಶನ'' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜನರು ಪ್ರತಿ ದಿನ ಸರ್ಕಾರಿ ಕಚೇರಿಗಳಿಗೆ ಅಲೆಯುವದನ್ನು ತಪ್ಪಿಸಲು ಜನತಾ ದರ್ಶನ ಕಾರ್ಯಕ್ರಮ ಸಹಕಾರಿಯಾಗುತ್ತದೆ. ಸಾರ್ವಜನಿಕರು ಮನೆ, ಸ್ಮಶಾನ ರಸ್ತೆ, ರಾಜ ಕಾಲುವೆ, ನಿವೇಶನ ಹಂಚಿಕೆ ಮುಂತಾದ ವಿವಿಧ ರೀತಿಯ ಸಮಸ್ಯೆ, ಬೇಡಿಕೆ, ದೂರು ಅಹವಾಲುಗಳನ್ನು ಸಲ್ಲಿಸುವರು. ಅವುಗಳಲ್ಲಿ

ನ್ಯಾಯಾಲಯ ಪ್ರಕರಣಗಳನ್ನು ಹೊರತು ಪಡಿಸಿ ಉಳಿದಂತ ಅರ್ಜಿಗಳನ್ನು ಶೀಘ್ರವೇ ಒಂದು ತಿಂಗಳ ಕಾಲಮಿತಿಯಲ್ಲಿ ಬಗೆಹರಿಸಲು ಕ್ರಮ ಕೈಗೊಳ್ಳಬೇಕು ಎಂದು ಸಚಿವರು ಹೇಳಿದರು.

ಶಾಸಕರ ಮನವಿಗೆ ಸ್ಪಂದಿಸಿದ ಸಚಿವರು ದೊಡ್ಡಬಳ್ಳಾಪುರದ ನಾಗರಕೆರೆ ಹಾಗೂ ಬಾಶೆಟ್ಟಿಹಳ್ಳಿ ಕೆರೆಗಳಿಗೆ ಕಾರ್ಖಾನೆಗಳ ತ್ಯಾಜ್ಯ ನೀರು ಹಾದು ಹೋಗಿ ನೀರು ಕಲುಷಿತಗೊಂಡಿರುವ ಬಗ್ಗೆ ವರದಿ ಇದೆ, ಜಿಲ್ಲಾಡಳಿತವು ಈಗಾಗಲೇ ಸ್ಥಳ ಪರಿಶೀಲನೆ ನಡೆಸಿ ತ್ಯಾಜ್ಯ ನೀರು ಕೆರೆಗಳಿಗೆ ಸೇರದಂತೆ ತಡೆಯಲು ಬದಲಿ ಮಾರ್ಗಗಳನ್ನು ರೂಪಿಸಲು ಸಿದ್ದತೆ ಕೈಗೊಂಡಿದ್ದು ಶೀಘ್ರವೇ ಸಮಸ್ಯೆಗೆ ಪರಿಹಾರ ದೊರೆಯಲಿದೆ ಎಂದರು.

ದೊಡ್ಡಬಳ್ಳಾಪುರ ದಲ್ಲಿ ಜಿಲ್ಲಾ ಆಸ್ಪತ್ರೆ ನಿರ್ಮಿಸಲು ಈಗಾಗಲೇ ಅನುಮೋದನೆ ದೊರಕಿದ್ದು, ಅನುದಾನ ಬಿಡುಗಡೆ ಮಾಡಲು ಆರೋಗ್ಯ ಸಚಿವರ ಜೊತೆ ಶೀಘ್ರವೆ ಚರ್ಚಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ದೊಡ್ಡಬಳ್ಳಾಪುರ ವಿಧಾನಸಭಾ ಕ್ಷೇತ್ರ ಶಾಸಕರಾದ ಧೀರಜ್ ಮುನಿರಾಜು ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ತಾಲ್ಲೂಕು ಮಟ್ಟದ ಅಧಿಕಾರಿಗಳು ಸಾರ್ವಜನಿಕರ ಸಮಸ್ಯೆಗಳಿಗೆ ಶೀಘ್ರವೇ ಸ್ಪಂದಿಸಿ, ಸಮಸ್ಯೆಯನ್ನು ನಿರ್ದಿಷ್ಟ ಕಾಲಮಿತಿಯೊಳಗೆ ಪರಿಹರಿಸಬೇಕು ಎಂದರಲ್ಲದೆ ತಾಲ್ಲೂಕಿನಲ್ಲಿ ಜಿಲ್ಲಾ ಆಸ್ಪತ್ರೆ ನಿರ್ಮಾಣ, ಒಳಚರಂಡಿ ವ್ಯವಸ್ಥೆ, ನಗರೋತ್ಥಾನ ಕಾಮಗಾರಿಗಳು, ನಿರಾಶ್ರಿತರಿಗೆ ಮನೆ ಕಲ್ಪಿಸುವ ಸಂಬಂಧ ಉಸ್ತುವಾರಿ ಸಚಿವರಿಗೆ ಮನವಿ ಸಲ್ಲಿಸಿದರು.

ಸರ್ಕಾರದ ನಿರ್ದೇಶನದಂತೆ ಪ್ರತಿ 15 ದಿನಕ್ಕೊಮ್ಮೆ ಜನತಾದರ್ಶನವನ್ನು ಹಮ್ಮಿಕೊಳ್ಳಲಾಗುವುದು ಜನತಾ ದರ್ಶನದಲ್ಲಿ ಸಲ್ಲಿಸಲಾದ ಅರ್ಜಿಗಳನ್ನು ಐ.ಪಿ.ಜಿ.ಆರ್.ಎಸ್ ಪೊರ್ಟಲ್ ನಲ್ಲಿ ನೋಂದಾಯಿಸಿ, ವಿಲೇವಾರಿ ಆದ ನಂತರ ಸರ್ಕಾರಕ್ಕೆ ವರದಿ ಸಲ್ಲಿಸಬೇಕು. ದೇವನಹಳ್ಳಿಯಲ್ಲಿ ನಡೆದ ಜನತಾ ದರ್ಶನದಲ್ಲಿ 277 ಅಹವಾಲು ಸ್ವೀಕರಿಸಲಾಗಿತ್ತು. ಅದರಲ್ಲಿ 145 ವಿಲೇವಾರಿ ಆಗಿದೆ. ಹೊಸಕೋಟೆ ಯಲ್ಲಿ ನಡೆದ ಜನತಾ ದರ್ಶನದಲ್ಲಿ 318 ಅರ್ಜಿಗಳು ಸ್ವೀಕರಿಸಿ 180 ಅರ್ಜಿ ವಿಲೇವಾರಿ ಮಾಡಲಾಗಿದೆ. ಇನ್ನು ಕೆಲವು ನ್ಯಾಯಾಲಯಕ್ಕೆ ಸಂಬಂಧಿಸಿದ ಅರ್ಜಿಗಳನ್ನು ಕುಲಂಕುಶವಾಗಿ ಪರಿಶೀಲಿಸ ಬೇಕಾಗಿರುವುದರಿಂದ ತಡವಾಗುತ್ತದೆ . ಒಟ್ಟಾರೆ ಶೇಕಡ 70% ರಷ್ಟು ಅರ್ಜಿಗಳು ವಿಲೇವಾರಿ ಮಾಡಲಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಡಾ.ಶಿವಶಂಕರ. ಎನ್ ಅವರು ಪ್ರಾಸ್ತಾವಿಕ ನುಡಿಗಳನ್ನಾಡಿದರು.

297 ಅರ್ಜಿ ಸ್ವೀಕಾರ

ಪೋಡಿ ಪ್ರಕರಣ, ಜಮೀನು ತಕರಾರು, ಗ್ರಾಮಗಳಿಗೆ ವಿದ್ಯುತ್ ಸಂಪರ್ಕ, ಜಮೀನು ಸರ್ವೆ, ಸ್ಮಶಾನ ಜಾಗ ಹಾಗೂ ರಸ್ತೆ ವ್ಯವಸ್ಥೆ, ಗೋಮಾಳ ಒತ್ತುವರಿ, ಹಕ್ಕು ಪತ್ರ ಹಂಚಿಕೆ, ಕೆರೆ ಕಟ್ಟೆ ಸಂರಕ್ಷಣೆ, ಪಡಿತರ ಚೀಟಿ ಹಂಚಿಕೆ, ನಿವೇಶನ ಹಂಚಿಕೆ, ಚರಂಡಿ ನಿರ್ಮಾಣ, ಮೂಲಭೂತ ಸಮಸ್ಯೆಗಳು ಸೇರಿದಂತೆ ಒಟ್ಟು 297 ಅಹವಾಲುಗಳನ್ನು ಸಾರ್ವಜನಿಕರಿಂದ ಸ್ವೀಕರಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಕೆ.ಎನ್.ಅನುರಾಧ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಸಾಮಾಜಿಕ ಅರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಸರಿನಾ, ದೊಡ್ಡಬಳ್ಳಾಪುರ ಉಪವಿಭಾಗಾಧಿಕಾರಿ ಶ್ರೀನಿವಾಸ್,ಎಂ ಜಿಲ್ಲಾಪಂಚಾಯಿತಿ ಉಪಕಾರ್ಯದರ್ಶಿ ಟಿ.ಕೆ ರಮೇಶ್, ದೊಡ್ಡಬಳ್ಳಾಪುರ ತಹಸೀಲ್ದಾರ್ ವಿದ್ಯಾ ವಿಭಾ ರಾತೋಡ್, ಕಾರ್ಯನಿರ್ವಾಹಕ ಅಧಿಕಾರಿ ಮುನಿರಾಜು, ಡಿವೈಎಸ್ಪಿ ರವಿ, ದೊಡ್ಡಬಳ್ಳಾಪುರ ನಗರಸಭಾ ಅಧ್ಯಕ್ಷರಾದ ಸುಧಾರಾಣಿ, ಉಪಾಧ್ಯಕ್ಷೆ ಫರಾನಾ ತಾಜ್ ಸೇರಿದಂತೆ, ಚುನಾಯಿತ ಜನ ಪ್ರತಿನಿಧಿಗಳು, ಜಿಲ್ಲಾಮಟ್ಟದ ಅಧಿಕಾರಿಗಳು, ತಾಲ್ಲೂಕು ಮಟ್ಟದ ಅಧಿಕಾರಿಗಳು, ಪಂಚಾಯಿತಿ ಅಧಿಕಾರಿಗಳು, ಮುಖಂಡರು, ಸಾರ್ವಜನಿಕರು ಉಪಸ್ಥಿತರಿದ್ದರು.

ಹೆಣ್ಣು ಮಕ್ಕಳ ಸಮಸ್ಯೆಗಳ ನಿವಾರಣೆಗೆ ಹೆಣ್ಣು ಮಕ್ಕಳ ದಿನಾಚರಣೆ

ಉದಯಕಾಲ ನ್ಯೂಸ್

ಕನಕಪುರ: ಹೆಣ್ಣು ಮಕ್ಕಳಿಗೆ ರಕ್ಷಣೆ ಮತ್ತು ಅವಕಾಶಗಳನ್ನು ನೀಡುವುದರ ಜೊತೆಗೆ ಹೆಣ್ಣು ಮಕ್ಕಳು ಸಮಾಜದಲ್ಲಿ ಅನುಭವಿಸುವ ತೊಂದರೆಗಳ ಬಗ್ಗೆ ಅರಿವು ಮೂಡಿಸುವ ಉದ್ದೇಶದಿಂದ ಭಾರತದಲ್ಲಿ ಹೆಣ್ಣು ಮಕ್ಕಳ ದಿನವನ್ನು ಆಚರಿಸಲಾಗುತ್ತದೆ ಎಂದು 1ನೇ ಅಪರ ಸಿವಿಲ್ ನ್ಯಾಯಾಧೀಶೆ ಸವಿತ ರುದ್ರಗೌಡ ಚಿಕ್ಕನಗೌಡರ್ ರವರು ಹೇಳಿದರು.

ನಗರದ ರೂರಲ್ ಬಾಲಕಿಯರ ಪ್ರೌಢಶಾಲೆಯಲ್ಲಿ ತಾಲೂಕು ಕಾನೂನು ಸೇವಾ ಸಮಿತಿ ಮತ್ತು ಶಾಲಾ ಶಿಕ್ಷಣ ಇಲಾಖೆ ಸಹೋಯೋಗದಲ್ಲಿ ನಡೆದ ಅಂತರ ರಾಷ್ಟ್ರೀಯ ಹೆಣ್ಣ ಮಕ್ಕಳ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ನಂತರ ಮಾತನಾಡಿದ ಅವರು, ಹೆಣ್ಣು ಮಕ್ಕಳ ವಿರುದ್ಧ ನಡೆಯುವ ಶೋಷಣೆ, ಹೆಣ್ಣು ಭ್ರೂಣ ಹತ್ಯೆ, ಲೈಂಗಿಕ ಕಿರುಕುಳ ಅಂತಹ ಕೃತ್ಯಗಳನ್ನು ತಡೆಗಟ್ಟಿ, ಹೆಣ್ಣು ಮಕ್ಕಳ ಹಕ್ಕಿನ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಪ್ರತಿ ವರ್ಷ ಅಂತಾರಾಷ್ಟ್ರೀಯ ಹೆಣ್ಣು ಮಗುವಿನ ದಿನಾಚರಣೆಯನ್ನು ಆಚರಿಸಲಾಗುತ್ತದೆ.

ಹೆಣ್ಣು ಮಕ್ಕಳ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ವಿಶ್ವಸಂಸ್ಥೆ 2012ರ ಅಕ್ಟೋಬರ್ 11ರಂದು. ಈ ದಿನವನ್ನು ಆಚರಣೆಗೆ ತಂದಿತು. ಸಾಮಾಜಕ ಪಿಡುಗು ಮುಕ್ತ ಸಮಾಜ ವಿಶ್ವದಾದ್ಯಂತ ಹೆಣ್ಣು ಮಕ್ಕಳುಎದುರಿಸುತ್ತಿರುವ ವರದಕ್ಷಿಣೆ ಕಿರುಕುಳ, ಭೇದಭಾವ ಮತ್ತು ಬಾಲ್ಯವಿವಾಹ ಅಂತಹ ಹಲವಾರು ಸಮಸ್ಯೆಗಳ ಬಗ್ಗೆ ಅರಿವು ಮೂಡಿಸುವುದರೊಂದಿಗೆ, ಸಾಮಾಜಿಕ ಪಿಡುಗು ಮುಕ್ತ ಸಮಾಜ ನಿರ್ಮಾಣ ಮಾಡಬೇಕೆಂಬದು ಇದರ ಉದ್ದೇಶವಾಗಿದೆ. ಆದ್ದರಿಂದ ಇಂದು ಅಂತಾರಾಷ್ಟ್ರೀಯ ಹೆಣ್ಣು ಮಕ್ಕಳ

ದಿನಾಚರಣೆಯಂದು ಹೆಣ್ಣಿನ ಸುರಕ್ಷತೆ, ಶಿಕ್ಷಣದ ಕುರಿತು ಅರಿವು ಮೂಡಿಸುವ ಹಾಗೂ ಅವರ ಭದ್ರತೆಗೆ ಸಂಕಲ್ಪ ತೊಡುವ ದಿನ ಎಂದು ತಿಳಿಸಿದರು.

ಆರ್.ಇ.ಎಸ್ ಸಂಸ್ಥೆ ಕಾರ್ಯದರ್ಶಿ ಪುಟ್ಟಸ್ವಾಮಿ ಮಾತನಾಡಿ, ಹೆಣ್ಣೊಂದು ಕಲಿತರೆ ಶಾಲೆಯೊಂದು ತೆರೆದಂತೆ ಎಂಬ ನಮ್ಮ ಪಾರಂಪರಿಕ ಜ್ಞಾನವೇ ಈ ಮಾತಿನಲ್ಲಿ ಅಡಗಿದ್ದು, ಇದನ್ನು ಅನುಷ್ಠಾನಕ್ಕೆ ತರುವ ನಿಟ್ಟಿನಲ್ಲಿ ದೇಶಾದ್ಯಂತ ಪ್ರಯತ್ನಗಳು ಸಾಗಿವೆ ಒಂದು ಕಾಲದಲ್ಲಿ ಹೆಣ್ಣು ಹುಟ್ಟುವುದನ್ನೇ ಕೀಳಾಗಿ ನೋಡಲಾಗುತ್ತಿದೆ. ಆದರೆ ಇಂದು ವಾತಾವರಣ ಬದಲಾಗಿದೆ. ಅನೇಕ ಮಂದಿ ಹೆಣ್ಣು ಮಕ್ಕಳ ಜನನವಾಗಲಿ ಎಂದು ಬಯಸುತ್ತಿದ್ದಾರೆ, ಅಲ್ಲದೇ ಪುತ್ರಿಯರ ಸಾಧನೆ ಕಂಡು ಸಂತಸಪಡುತ್ತಿದ್ದಾರೆ. ಅಷ್ಟೆ ಅಲ್ಲದೇ ಲಿಂಗ ತಾರತಮ್ಯವನ್ನು ಹೋಗಲಾಡಿಸಿ ಸಮಾನತೆಯನ್ನು ಪ್ರಚುರ ಪಡಿಸುವ ದೃಷ್ಟಿಯಿಂದ ವಿವಿಧ ದೇಶಗಳು ಮಗಳ ದಿನವನ್ನು ರಾಷ್ಟ್ರೀಯ ಉತ್ಸವವಾಗಿ ಆಚರಿಸಲು ನಿರ್ಧರಿಸಿವೆ. ಸರಕಾರ ಮತ್ತು ಕಾನೂನಿನ ಮುಂದೆ ಪ್ರತಿ ನಾಗರಿಕ ಸರಿಸಮಾನ ಎಂಬುದನ್ನು ಪ್ರತಿಯೊಬ್ಬರಿಗೆ ಮನವರಿಕೆ ಮಾಡಿಸುವುದು ಇದರ ಉದ್ದೇಶ. ಈ ದಿನದ ಆಚರಣೆ ವರ್ಷದಿಂದ ವರ್ಷಕ್ಕೆ ಪರಿಣಾಮಕಾರಿಯಾಗುತ್ತಿದ್ದು, ಮೌಢ್ಯ, ಪೂರ್ವಗ್ರಹಗಳನ್ನು ಬದಿಗೆ ಸರಿಸುತ್ತ ಕಾಲ ಹೇಗೆ ಬದಲಾಗುತ್ತಿದೆ ಎಂಬುದನ್ನು ಈ ಆಚರಣೆಯ ಯಶಸ್ಸು ತೋರಿಸುತ್ತದೆ ಎಂದು ಹೇಳಿದರು.

ಕಾರ್ಯಕ್ರಮವನ್ನು ವಕೀಲರ ಸಂಘದ ಖಜಾಂಚಿ ಟಿ.ಎಸ್.ಸಾಗರ್ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ನಾರಾಯಣ್, ಆರ್.ಜಿ.ಹೆಚ್.ಎಸ್ ಮುಖ್ಯ ಶಿಕ್ಷಕ ರಾಮಚಂದ್ರ ಡ್ಯನಿ, ಶಿಕ್ಷಣ ಸಂಯೋಜಕ ರಂಗಸ್ವಾಮಿ, ಸಹಾಯಕ ಸರ್ಕಾರಿ ಅಭಿಯೋಜಕ ಗಂಗಾಧರ.ಬಿ.ಕೆ ಸೇರಿದಂತೆ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕುಡಿಯುವ ನೀರಿಗೆ ಹಾಹಾಕಾರ

ಉದಯಕಾಲ ನ್ಯೂಸ್

ಬಾಗೇಪಲ್ಲಿ: ಬೇಸಿಗೆ ಕಾಲ ಇನ್ನೂ ಮೂರು ನಾಲ್ಕೂ ತಿಂಗಳು ಬಾಕಿ ಇರುವಾಗಲೇ ಬಾಗೇಪಲ್ಲಿ ಪಟ್ಟಣ ವ್ಯಾಪ್ತಿಯಲ್ಲಿರುವ ವಿವಿಧ ವಾರ್ಡ್‌ಗಳಲ್ಲಿ ನೀರಿನ ಕ್ಷಾಮ ಉದ್ಭವಿಸಿದ್ದು ಪುರಸಭೆ ಅಧಿಕಾರಿಗಳು, ಚುನಾಯಿತ ಜನಪ್ರತಿನಿಧಿಗಳು ಎಚ್ಚೆತ್ತುಕೊಳ್ಳಬೇಕಾಗಿದೆ ಎಂದು ಸ್ಥಳೀಯರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಬಾಗೇಪಲ್ಲಿ ಪಟ್ಟಣದ 12 ನೇ ವಾರ್ಡ್‌ನಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಕಾಲೋನಿ ಪ್ರದೇಶದಲ್ಲಿ ಈಗಾಗಲೇ ಕುಡಿಯುವ ನೀರಿಗಾಗಿ ಹಾಹಾಕಾರ ಉಂಟಾಗಿದ್ದು, ಸ್ಥಳೀಯ ಮಹಿಳೆಯರು ಟ್ಯಾಂಕರ್ ನೀರಿಗಾಗಿ ಮುಗಿ ಬೀಳುವಂತಾಗಿದೆ. ಬರದನಾಡು ಬಾಗೇಪಲ್ಲಿ ತಾಲೂಕು ವ್ಯಾಪ್ತಿಯಲ್ಲಿ ಈ ಬಾರಿ ನಿರೀಕ್ಷಿತ ಪ್ರಮ